**ಮಾನ್ಯ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಛಲವಾದಿ ನಾರಾಯಣ ಸ್ವಾಮಿ, ಶ್ರೀ ಸಿ.ಟಿ.ರವಿ, ಶ್ರೀಮತಿ ಭಾರತಿಶೆಟ್ಟಿ, ಶ್ರೀ ಹಣಮಂತ ರುದ್ರಪ್ಪ ನಿರಾಣಿ, ಡಾ|| ಧನಂಜಯ ಸರ್ಜಿ, ಶ್ರೀಮತಿ ಹೇಮಲತಾ ನಾಯಕ್, ಶ್ರೀ ಎಸ್. ಕೇಶವಪ್ರಸಾದ್, ಶ್ರೀ ಸುನೀಲ್ ವಲ್ಯಾಪುರೆ ಮತ್ತು ಶ್ರೀ ಕೆ.ಎ.ತಿಪ್ಪೇಸ್ವಾಮಿ ಇವರು ಪ್ರಸ್ತಾಪಿಸಿರುವ ನಿಲುವಳಿ ಸೂಚನೆ ಕುರಿತು.**

**ಸೂಚನೆ:**

2024-25ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಅಭಿವೃದ್ಧಿಯ ಉಪ ಯೋಜನೆಗಳಿಗೆ ಮೀಸಲಿಡಲಾಗಿದ್ದ 14,730.53 ಕೋಟಿ ರೂ.ಗಳನ್ನು ಸರ್ಕಾರ ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಿ ಗ್ಯಾರಂಟಿ ಯೋಜನೆ ಅನುಷ್ಠಾನಕ್ಕೆ ಬಳಕೆ ಮಾಡಿದೆ. ಪರಿಶಿಷ್ಟ ಜಾತಿ/ಪಂಗಡದ ಜನಾಂಗಗಳ ಹಿಂದುಳಿದಿರುವಿಕೆಯನ್ನು ಗಂಭೀರವಾಗಿ ಪರಿಗಣಿಸಿ ಇತರರ ಸರಿಸಮಾನವಾಗಿ ಈ ಜನಾಂಗವನ್ನು ಸಾಮಾಜಿಕವಾಗಿ, ಆರ್ಥಿಕವಾಗಿ ಸದೃಢಗೊಳಿಸಲು ಮೀಸಲಾತಿ ನೀಡಿದ್ದ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ, ಸರ್ಕಾರ ನಡೆದುಕೊಂಡಿದೆ. ದಲಿತರ ಸಬಲೀಕರಣಕ್ಕೆ ಬದ್ಧವೆಂದು ಘೋಷಣೆ ಮಾಡಿದ್ದ ಈ ಸರ್ಕಾರವೇ ದಲಿತರ ಹಣವನ್ನು ಅನ್ಯ ಉದ್ದೇಶಕ್ಕೆ ಬಳಕೆ ಮಾಡಿಕೊಂಡಿರುವುದು ಸರ್ಕಾರದ ಗೊತ್ತುಗುರಿ ಇಲ್ಲದ ಆರ್ಥಿಕ ನೀತಿಗೆ ಸಾಕ್ಷಿಯಾಗಿದೆ. ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಗಳಿಗೆ ಮೀಸಲಿಟ್ಟ ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳುವುದು ಕಾಯ್ದೆಗೆ ವಿರುದ್ಧವಾಗಿದ್ದು, ಸರ್ಕಾರದ ಈ ನಿರ್ಧಾರ ಪರಿಶಿಷ್ಟ ಜನರ ಹಕ್ಕನ್ನು ಕಿತ್ತುಕೊಂಡು ಅವರಿಗೆ ದ್ರೋಹ ಮಾಡಿದೆ. ಪರಿಶಿಷ್ಟರ ಕಲ್ಯಾಣದ ಆಶಯವನ್ನೇ ಬುಡಮೇಲು ಮಾಡಿರುವ ಸರ್ಕಾರದ ನಿರ್ಧಾರದ ಕುರಿತು ನಿಲುವಳಿ ಸೂಚನೆ:-

**ಉತ್ತರ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಆಯವ್ಯಯದಲ್ಲಿ ಅನುದಾನ ಮೀಸಲಿಡಲು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013 ಅನ್ನು 2014-15ನೇ ಸಾಲಿನಿಂದ ಜಾರಿಗೆ ತರಲಾಗಿದೆ.

2011ರ ಜನಗಣತಿಯ ಪ್ರಕಾರ ಪರಿಶಿಷ್ಟ ಜಾತಿಯವರ ಜನಸಂಖ್ಯೆ 17.15% ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆ 6.95% ಇದ್ದು, ಒಟ್ಟು 24.10% ಆಗುತ್ತದೆ. ಇದರನ್ವಯ ಪ್ರತಿ ವರ್ಷ ಅಭಿವೃದ್ಧಿ ಆಯವ್ಯಯದಲ್ಲಿ 24.10% ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾಗುತ್ತದೆ. 2024-25ನೇ ಸಾಲಿನಲ್ಲಿ ರಾಜ್ಯದ ಅಭಿವೃದ್ಧಿ ಆಯವ್ಯಯವು ರೂ.1.60 ಲಕ್ಷ ಕೋಟಿ ಇದ್ದು, ಅದರಲ್ಲಿ 24.10% ರಂತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ರೂ.39,121.46 ಕೋಟಿ ಅನುದಾನ ಹಂಚಿಕೆ ಮಾಡಲಾಗಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ರಲ್ಲಿ ಕಲಂ 2(ಸಿ) ಅಡಿ ಸಾಮಾನ್ಯ ಸ್ಕೀಮ್ ಗಳು ಅಂದರೆ, "ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳನ್ನು ಒಳಗೊಂಡಂತೆ ಎಲ್ಲಾ ಸಾಮಾಜಿಕ ಸಮುದಾಯಗಳಿಗೆ ಪ್ರಯೋಜನವಾಗುವಂತಹ ಇಲಾಖೆಗಳ ವಾರ್ಷಿಕ ಯೋಜನೆಗಳಲ್ಲಿ ಒಳಗೊಂಡಿರುವ ಸ್ಕೀಮ್‌ಗಳು ಎಂದು" ಇರುತ್ತದೆ.

ಸೆಕ್ಷನ್ 7(ಸಿ) ಯಡಿ ``ಸಾಮಾನ್ಯ ಸಾಮಾಜಿಕ ವಲಯದ ಸ್ಕೀಮುಗಳು" ಎಂದರೆ, ಉಪ-ಯೋಜನೆಗಳಲ್ಲಿ ಸೇರಿಸಿರುವ ಶಿಕ್ಷಣ, ಆರೋಗ್ಯ, ಮಹಿಳಾ ಮತ್ತು ಮಕ್ಕಳು, ಕಾರ್ಮಿಕ, ದೈಹಿಕ ವಿಕಲ ಚೇತನರ ಸ್ಕೀಮುಗಳು. ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ

ಪಂಗಡದ ವ್ಯಕ್ತಿಗಳಿಗೆ ಅಥವಾ ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಪಂಗಡದ ಕುಟುಂಬಗಳಿಗೆ, ಇತರರ ಜೊತೆಯಲ್ಲಿ ಪ್ರಯೋಜನವಾಗುವಂತಿದ್ದರೆ, ಸ್ಕೀಮಿನ ವೆಚ್ಚವನ್ನು, ಎಸ್.ಸಿ/ಎಸ್.ಟಿ ಫಲಾನುಭವಿಗಳ ಜನ ಸಂಖ್ಯೆಯ ಪ್ರಮಾಣಕ್ಕನುಗುಣವಾಗಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿಯಲ್ಲಿ ಹಂಚಿಕೆ ಮಾಡತಕ್ಕದ್ದು ಮತ್ತು ಲೆಕ್ಕ ತೋರಿಸತಕ್ಕದ್ದು; ಎಂದು ಇರುತ್ತದೆ.

ಅದರಂತೆ, ಸದರಿ ಸೆಕ್ಷನ್ 7(ಸಿ) ಪ್ರಕಾರ ಕಾಯ್ದೆಯ ಅನುಷ್ಠಾನದ ಪ್ರಾರಂಭದಿಂದಲೂ ಶಿಕ್ಷಣ, ಆರೋಗ್ಯ, ಕೃಷಿ, ತೋಟಗಾರಿಕೆ, ನೀರಾವರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರ್.ಡಿ.ಪಿ.ಆರ್, ಯೋಜನಾ, ಇಂಧನ ಇತ್ಯಾದಿ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳು ಒಳಗೊಂಡಂತೆ ಎಲ್ಲರಿಗೂ ಪ್ರಯೋಜನವಾಗುವ ಸಾಮಾನ್ಯ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ ಮಾತ್ರ ವಿನಿಯೋಗಿಸುವ ಷರತ್ತಿಗೆ ಒಳಪಟ್ಟು ಹಂಚಿಕೆ ಮಾಡಲಾಗುತ್ತಿದೆ. ಪ್ರಮುಖ ಯೋಜನೆಗಳ ವಿವರ ಈ ಕೆಳಗಿನಂತಿದೆ.

1. 10 ಹೆಚ್.ಪಿ ವರೆಗಿನ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಹಾಯಧನ
2. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ
3. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ
4. ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ
5. ಮುಖ್ಯಮಂತ್ರಿ ಸೂಕ್ಷ್ಮ ನೀರಾವರಿ ಯೋಜನೆ
6. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ
7. ಕೃಷಿ ಭಾಗ್ಯ
8. ರಾಷ್ಟ್ರೀಯ ಆಹಾರ ಸುರಕ್ಷತೆ ಮಿಷನ್
9. ರಾಷ್ಟ್ರೀಯ ತೋಟಗಾರಿಕಾ ಮಿಷನ್
10. ಸಮಗ್ರ ತೋಟಗಾರಿಕೆ ಅಭಿವೃದ್ಧಿ
11. ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ
12. ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆ
13. ಸ್ವಚ್ಛ ಭಾರತ ಅಭಿಯಾನ
14. ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ (ಜಲ ಜೀವನ್ ಮಿಷನ್)
15. ನಮ್ಮ ಗ್ರಾಮ ನಮ್ಮ ರಸ್ತೆ
16. ಭಾಗ್ಯಲಕ್ಷ್ಮಿ
17. ವಿಕಲಚೇತನರ ಅಭಿವೃದ್ಧಿ ಕಾರ್ಯಕ್ರಮಗಳು
18. ಅಂಗನವಾಡಿ ಮಕ್ಕಳಿಗೆ ರಾಷ್ಟ್ರೀಯ ಪೌಷ್ಟಿಕ ಆಹಾರ ಯೋಜನೆ
19. ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆ
20. ಆರ್.ಟಿ.ಇ ಖಾಸಗಿ ಶಾಲೆಗಳ ಶುಲ್ಕ ಮರುಪಾವತಿ.
21. ವಿದ್ಯಾವಿಕಾಸ ಯೋಜನೆ
22. ಸರ್ವಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ.
23. ಅನ್ನಭಾಗ್ಯ ಯೋಜನೆ.
24. ಕಂದಾಯ ಇಲಾಖೆಯ ಮೂಲಕ ವೃದ್ಧಾಪ್ಯ ವೇತನ, ವಿಧವಾ ವೇತನ ಸೇರಿದಂತೆ ವಿವಿಧ ಪಿಂಚಣಿಗಳು.

25. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ, ಬಯಲುಸೀಮೆ ಅಭಿವೃದ್ಧಿ ಮಂಡಳಿ, ಮಲೆನಾಡು ಅಭಿವೃದ್ಧಿ ಮಂಡಳಿ ಇತ್ಯಾದಿ ಮಂಡಳಿಗಳ ಮೂಲಕ ಅನುಷ್ಠಾನ ಮಾಡುವ ಕಾರ್ಯಕ್ರಮಗಳು.

ಇದರಂತೆ, ಬೇರೆ ರಾಜ್ಯಗಳು ಮತ್ತು ಭಾರತ ಸರ್ಕಾರದಲ್ಲಿಯೂ ಸಹ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ವಿವಿಧ ಇಲಾಖೆಯ ಸಾಮಾನ್ಯ ಯೋಜನೆಗಳಿಗೂ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನ ಹಂಚಿಕೆ ಮಾಡಿ ಎಸ್.ಸಿ/ಎಸ್.ಟಿ ಜನರಿಗೆ ಸೌಲಭ್ಯ ಒದಗಿಸಲಾಗುತ್ತಿದೆ. ಭಾರತ ಸರ್ಕಾರದ ನೀತಿ ಆಯೋಗದ ಮಾರ್ಗಸೂಚಿಗಳಂತೆ ವಿವಿಧ ಇಲಾಖೆಗಳ ವಿವಿಧ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನ ಹಂಚಿಕೆ ಮಾಡಲಾಗುತ್ತಿದೆ.

ಸರ್ಕಾರದ ಪ್ರಮುಖ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳು ಎಲ್ಲಾ ಸಮುದಾಯದವರಿಗೂ ಪ್ರಯೋಜನವಾಗುವ ಸಾಮಾನ್ಯ ಕಾರ್ಯಕ್ರಮಗಳಾಗಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ ಮಾತ್ರ ವಿನಿಯೋಗಿಸುವ ಷರತ್ತಿಗೆ ಒಳಪಟ್ಟು ಭಾಗಶಃ ಅನುದಾನ ಹಂಚಿಕೆ ಮಾಡಲಾಗಿದೆ. ಆದ್ದರಿಂದ, ಗ್ಯಾರಂಟಿ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ನೀಡಿರುವ ಅನುದಾನ ಇತರರಿಗೆ ಉಪಯೋಗಿಸಲು divert ಮಾಡಿರುವುದಿಲ್ಲ.

**2024-25ನೇ ಸಾಲಿನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಹಂಚಿಕೆ ಮಾಡಿರುವ ಅನುದಾನದ ವಿವರ**

(ರೂ. ಕೋಟಿಗಳಲ್ಲಿ)

| Sl No | Schemes | Allocation under SCSP | Allocation under TSP | Allocation under General Budget | Total Allocation |
|---|---|---|---|---|---|
| 1 | Gruha Lakshmi | 5,546.53 | 2,335.38 | 20,726.50 | 28,608.40 |
| 2 | Annabhagya | 1,539.18 | 648.41 | 5,891.41 | 8,079.00 |
| 3 | Shakthi | 1,001.00 | 450.45 | 3,563.55 | 5,015.00 |
| 4 | GruhaJyothi | 1,770.45 | 815.48 | 7,071.07 | 9,657.00 |
| 5 | Yuvanidhi | 123.50 | 52.00 | 474.50 | 650.00 |
| | **Total** | **9,980.66** | **4,301.72** | **37,727.02** | **52,009.40** |

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ಕಾರಣ ಅನ್ಯ ಉದ್ದೇಶಕ್ಕಾಗಿ ಅನುದಾನ ಬಳಸಿರುವುದಿಲ್ಲ. ಆದ್ದರಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯ ಪ್ರಶ್ನೆ ಉದ್ಭವಿಸುವುದಿಲ್ಲ.

2023-24ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಹಿತದೃಷ್ಟಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು 2023 ರಲ್ಲಿ ರದ್ದುಪಡಿಸಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ.

**ಸಕಇ 228 ಎಸ್‌ಎಲ್‌ಪಿ 2024 (ಭಾ)**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

**ಮಾನ್ಯ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಛಲವಾದಿ ಟಿ. ನಾರಾಯಣ ಸ್ವಾಮಿ, ಶ್ರೀ ಸಿ.ಟಿ.ರವಿ, ಶ್ರೀ ಕೇಶವ ಪ್ರಸಾದ್.ಎಸ್, ಶ್ರೀ ಸುನೀಲ್ ವಲ್ಯಾಪೂರ್, ಡಾ: ಧನಂಜಯ ಸರ್ಜಿ, ಭಾರತಿ ಶೆಟ್ಟಿ ಹಾಗೂ ಇತರರು ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಅಭಿವೃದ್ಧಿಯ ಉಪ ಯೋಜನೆಗಳಿಗೆ ಮೀಸಲಿಡಲಾಗಿದ್ದ ಹಣವನ್ನು ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಕುರಿತು ಗಮನ ಸೆಳೆಯುವುದು.

**ಉತ್ತರ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಆಯವ್ಯಯದಲ್ಲಿ ಅನುದಾನ ಮೀಸಲಿಡಲು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013 ಅನ್ನು 2014-15ನೇ ಸಾಲಿನಿಂದ ಜಾರಿಗೆ ತರಲಾಗಿದೆ.

2011ರ ಜನಗಣತಿಯ ಪ್ರಕಾರ ಪರಿಶಿಷ್ಟ ಜಾತಿಯವರ ಜನಸಂಖ್ಯೆ 17.15% ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆ 6.95% ಇದ್ದು, ಒಟ್ಟು 24.10% ಆಗುತ್ತದೆ. ಇದರನ್ವಯ ಪ್ರತಿ ವರ್ಷ ಅಭಿವೃದ್ಧಿ ಆಯವ್ಯಯದಲ್ಲಿ 24.10% ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾಗುತ್ತದೆ. 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ ಅಡಿ ರೂ.27,673.96 ಕೋಟಿ ಮತ್ತು ಟಿ.ಎಸ್.ಪಿ ಅಡಿ ರೂ.11,447.50 ಕೋಟಿ, ಒಟ್ಟು ರೂ.39,121.46 ಕೋಟಿ ಅನುದಾನ ಒದಗಿಸಲಾಗಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ರಲ್ಲಿ ಕಲಂ 2(ಸಿ) ಅಡಿ ಸಾಮಾನ್ಯ ಸ್ಕೀಮ್ ಗಳು ಅಂದರೆ, "ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳನ್ನು ಒಳಗೊಂಡಂತೆ ಎಲ್ಲಾ ಸಾಮಾಜಿಕ ಸಮುದಾಯಗಳಿಗೆ ಪ್ರಯೋಜನವಾಗುವಂತಹ ಇಲಾಖೆಗಳ ವಾರ್ಷಿಕ ಯೋಜನೆಗಳಲ್ಲಿ ಒಳಗೊಂಡಿರುವ ಸ್ಕೀಮ್‌ಗಳು" ಎಂದು ಇರುತ್ತದೆ. ಸದರಿ ಕಾಯ್ದೆಯ ಕಲಂ 7(ಸಿ) ಯಡಿ ``ಸಾಮಾನ್ಯ ಸಾಮಾಜಿಕ ವಲಯದ ಸ್ಕೀಮುಗಳಿಗೆ ಅನುಸೂಚಿತ ಜಾತಿಗಳು, ಅನುಸೂಚಿತ ಪಂಗಡದ ವ್ಯಕ್ತಿಗಳಿಗೆ ಅಥವಾ ಅನುಸೂಚಿತ ಜಾತಿಗಳು, ಅನುಸೂಚಿತ ಪಂಗಡದ ಕುಟುಂಬಗಳಿಗೆ, ಇತರರ ಜೊತೆಯಲ್ಲಿ ಪ್ರಯೋಜನವಾಗುವಂತಿದ್ದರೆ, ಸ್ಕೀಮಿನ ವೆಚ್ಚವನ್ನು, ಎಸ್.ಸಿ/ಎಸ್.ಟಿ ಜನ ಸಂಖ್ಯೆಯ ಪ್ರಮಾಣಕ್ಕನುಗುಣವಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿಯಲ್ಲಿ ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಅದರಂತೆ, ಸದರಿ ಸೆಕ್ಷನ್ 7(ಸಿ) ಪ್ರಕಾರ ಕಾಯ್ದೆಯ ಅನುಷ್ಠಾನದ ಪ್ರಾರಂಭದಿಂದಲೂ ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣ, ಆರೋಗ್ಯ, ವೈದ್ಯಕೀಯ ಶಿಕ್ಷಣ, ಕೃಷಿ, ತೋಟಗಾರಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರ್.ಡಿ.ಪಿ.ಆರ್, ಇಂಧನ, ಪಶು ಸಂಗೋಪನೆ, ಮೀನುಗಾರಿಕೆ, ರೇಷ್ಮೆ, ಕೌಶಲ್ಯಾಭಿವೃದ್ಧಿ ಇತ್ಯಾದಿ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಜನರು ಒಳಗೊಂಡಂತೆ ಎಲ್ಲರಿಗೂ ಪ್ರಯೋಜನವಾಗುವ ಸಾಮಾನ್ಯ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಎಸ್.ಸಿ/ಎಸ್.ಟಿ ಜನರಿಗೆ ಮಾತ್ರ ವಿನಿಯೋಗಿಸಲು ಹಂಚಿಕೆ ಮಾಡಲಾಗುತ್ತಿದೆ.

ಇತರ ರಾಜ್ಯಗಳಲ್ಲಿ ಸಹ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ/ಮಾರ್ಗಸೂಚಿಗಳನ್ವಯ ಅನುದಾನವನ್ನು ವಿವಿಧ ಅಭಿವೃದ್ಧಿ ಇಲಾಖೆಗಳ ಸಾಮಾನ್ಯ ಕಾರ್ಯಕ್ರಮಗಳಡಿ ಎಸ್.ಸಿ/ಎಸ್.ಟಿ ಜನರಿಗೆ ಉಪಯೋಗಿಸಲು ಭಾಗಶಃ ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾಗುತ್ತಿದೆ.

ಭಾರತ ಸರ್ಕಾರದಲ್ಲಿಯೂ ಸಹ SCSP/TSP ಕಾರ್ಯಕ್ರಮಗಳನ್ನು DAPSC (Development Action Plan for SC) ಮತ್ತು DAPST (Development Action Plan ,for ST) ಎಂದು ಕರೆಯಲಾಗುತ್ತಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಭಾಗಶಃ ಅನುದಾನವನ್ನು ವಿವಿಧ ಇಲಾಖೆಗಳ ಸಾಮಾನ್ಯ ಯೋಜನೆಗಳಿಗೂ ಹಂಚಿಕೆ ಮಾಡಿ ಅನುಷ್ಠಾನಗೊಳಿಸಲಾಗುತ್ತಿದೆ.

ಭಾರತ ಸರ್ಕಾರದ ನೀತಿ ಆಯೋಗದ ಮಾರ್ಗಸೂಚಿಗಳಂತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ವಿವಿಧ ಇಲಾಖೆಗಳ ಸಾಮಾನ್ಯ ಯೋಜನೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಶೇಕಡವಾರು ಅನುದಾನವನ್ನು ಹಂಚಿಕೆ ಮಾಡಲು ತಿಳಿಸಲಾಗಿರುತ್ತದೆ.

ಸರ್ಕಾರದ ಗ್ಯಾರಂಟಿ ಯೋಜನೆಗಳು ಎಲ್ಲಾ ಸಮುದಾಯದವರಿಗೂ ಪ್ರಯೋಜನವಾಗುವ ಸಾಮಾನ್ಯ ಯೋಜನೆಗಳಾಗಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಎಸ್.ಸಿ/ಎಸ್.ಟಿ ಜನರಿಗೆ ಮಾತ್ರ ವಿನಿಯೋಗಿಸಲು ಭಾಗಶಃ ಅನುದಾನ ಹಂಚಿಕೆ ಮಾಡಲಾಗಿದೆ. ಆದ್ದರಿಂದ, ಗ್ಯಾರಂಟಿ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ನೀಡಿರುವ ಅನುದಾನ ಇತರರಿಗೆ ಉಪಯೋಗಿಸಲು divert ಮಾಡಿರುವುದಿಲ್ಲ. 05 ಗ್ಯಾರಂಟಿ ಯೋಜನೆಗಳಿಗೆ ಒಟ್ಟು ರೂ.52,009.40 ಕೋಟಿ ಒದಗಿಸಿದ್ದು, ಅದರ ಪೈಕಿ ಎಸ್.ಸಿ.ಎಸ್.ಪಿ ಅಡಿ ರೂ.9,980.66 ಕೋಟಿ ಮತ್ತು ಟಿ.ಎಸ್.ಪಿ ಅಡಿ ರೂ.4,301.72 ಕೋಟಿ ಒದಗಿಸಲಾಗಿದೆ. ಇತರರಿಗೆ ಸಾಮಾನ್ಯ ಆಯವ್ಯಯದಲ್ಲಿ ರೂ.37,727.02 ಕೋಟಿ ಅನುದಾನ ಒದಗಿಸಲಾಗಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರಿಗೆ ಮಾತ್ರ ವಿನಿಯೋಗಿಸುತ್ತಿರುವ ಕಾರಣ ಈ ಅನುದಾನವನ್ನು divert ಮಾಡಿದಂತಾಗುವುದಿಲ್ಲ.

2014-15ನೇ ಸಾಲಿನಿಂದ 2022-23ನೇ ಸಾಲಿನವರೆಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಅಡಿಯಲ್ಲಿ ವಿಭಜಿಸಲಾಗದ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಅನುದಾನವನ್ನು ನೀಡಲಾಗುತಿತ್ತು. ಈ ಅನುದಾನವನ್ನು ಡೀಮ್ಡ್ ವೆಚ್ಚವೆಂದು ಭಾವಿಸಲಾಗುತ್ತಿತ್ತು. ಆದರೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಅಭಿವೃದ್ಧಿಯ ಹಿತದೃಷ್ಠಿಯಿಂದ, 2023-24ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು 2023 ರಲ್ಲಿ ರದ್ದುಪಡಿಸಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಇದರಿಂದ ಫಲಾನುಭವಿ ಆಧಾರಿತ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ಲಭ್ಯವಾಗುತ್ತಿದೆ.

**ಸಕಇ 228 ಎಸ್ಎಲ್ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ.)**
**ಸಮಾಜ ಕಲ್ಯಾಣ ಸಚಿವರು**